ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	784 (874)
ಸದಸ್ಯರ ಹೆಸರು	:	ಶ್ರೀ ಮುನಿರಾಜುಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	20.09.2021
ಉತ್ತರಿಸುವವರು	:	ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಕಾಡಾನೆ ಹಾವಳಿಯಿಂದ ರೈತರ ಬೆಳೆಗಳಿಗೆ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ	ಹಾಗಿದ್ದಲ್ಲಿ ಅವುಗಳ ನಿಯಂತ್ರಣಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ಹಾಗೂ ಪ್ರಸ್ತುತ ಬೆಳೆಹಾನಿಗೆ ನೀಡುತ್ತಿರುವ ಹಣವೆಷ್ಟು;	ರಾಜ್ಯದಲ್ಲಿ ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. 1. ರಾಜ್ಯದಲ್ಲಿರುವ ವನ್ಯಜೀವಿಗಳಿಗೆ ಸಂಪೂರ್ಣ ರಕ್ಷಣೆ ನೀಡುವ ಸಲುವಾಗಿ ರಾಷ್ಟ್ರೀಯ ಉದ್ಯಾನವನ, ಅಭಯಾರಣ್ಯ, ಹುಲಿ ಮೀಸಲು ಅರಣ್ಯ, ಸಂರಕ್ಷಿತ ಮೀಸಲು ಅರಣ್ಯಗಳನ್ನು ಘೋಷಿಸಲಾಗಿರುತ್ತದೆ. 2. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ. 3. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ. 4. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. 5. ಕಳ್ಳಬೇಟೆ ತಡೆ ಶಿಬಿರಗಳಿಗೆ ಕ್ಷಿಪ್ರ ಕಾರ್ಯಾಚರಣೆ ಪಡೆ (RRT) ಗಳನ್ನು ಅಂದರೆ ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ, ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಹಾಗೂ Wireless Networking ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.

---2

ಕ್ರ.ಸಂ	ಪ್ರಶ್ನೆ	ಉತ್ತರ
		6. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ. 7. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ. 8. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಅಪಜೀ-130-ಎಫ್‌ಡಬ್ಲ್ಯೂಎಲ್-2016, ದಿನಾಂಕ: 19/9/2016ರಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆಹಾನಿ ಪ್ರಕರಣಗಳಲ್ಲಿ ಪರಿಹಾರ ಧನವನ್ನು (Ex-gratia) ಪಾವತಿಸಲು ಬೆಳೆಗಳಿಗೆ ನಿಗದಿಪಡಿಸಿದ ದರಗಳನ್ವಯ ಪಾವತಿಸಲಾಗುತ್ತಿದೆ.
ಇ	ರೈತರಿಗೆ ಪರಿಹಾರದ ಹಣವು ಬಾಕಿ ಇರುವುದು ನಿಜವೇ; ಹಾಗಿದ್ದಲ್ಲಿ, ಈ ಪರಿಹಾರ ಹಣವನ್ನು ಯಾವಾಗ ಪಾವತಿಸಲಾಗುವುದು;	2021-22ನೇ ಸಾಲಿಗೆ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಲ್ಲಿ ಪರಿಹಾರ ಧನವನ್ನು (Ex-gratia) ಪಾವತಿಸಲು ರೂ.1400.00 ಲಕ್ಷಗಳನ್ನು ಹಂಚಿಕೆ ಮಾಡಿ ಬಿಡುಗಡೆ ಮಾಡಲಾಗಿರುತ್ತದೆ. ಈ ಪೈಕಿ ರೂ. 356.24 ಲಕ್ಷಗಳನ್ನು ಕಾಯ್ದಿರಿಸಲಾಗಿದ್ದು, ವಿಭಾಗಾಧಿಕಾರಿಗಳ ಕೋರಿಕೆ ಅನುಸಾರ ಅನುದಾನವನ್ನು ಬಿಡುಗಡೆ ಮಾಡಲಾಗುವುದು.
ಈ	ಬೆಳೆ ಹಾನಿ ಪರಿಹಾರವನ್ನು ನೀಡಲು ಕಾಲಮಿತಿ ಇದೆಯೇ;	ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆ ಹಾನಿ ಪ್ರಕರಣಗಳಿಗೆ ಕಡ್ಡಾಯವಾಗಿ ಇ-ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಆದ್ಯತೆ ಮೇರೆಗೆ ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ನೇರವಾಗಿ ಸಂತ್ರಸ್ತರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು ನಿರ್ವಹಿಸಲಾಗುತ್ತಿದೆ. ಸದರಿ ಪ್ರಕ್ರಿಯೆಯಲ್ಲಿ ಪರಿಹಾರವನ್ನು ಪಾವತಿಸಲು ಯಾವುದೇ ಕಾಲಮಿತಿ ಇರುವುದಿಲ್ಲ.
ಉ	ಪ್ರಸ್ತುತ ನೀಡುತ್ತಿರುವ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ, ಹಾಗಿದ್ದಲ್ಲಿ ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು?	ಹೌದು. ಸರ್ಕಾರದ ಆದೇಶದ ಪ್ರಕಾರ ಈಗಾಗಲೇ ಪಾವತಿಸಲಾಗುತ್ತಿರುವ ಬೆಳೆಗಳ ದರವನ್ನು ಪರಿಷ್ಕರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಸಂಖ್ಯೆ: ಅಪಜೀ 179 ಎಫ್‌ಡಬ್ಲ್ಯೂಎಲ್ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು